ADVERTORIAL

# ಹೋರಾಟದ ನೇತಾರ ಹೊರಟ್ಟಿ ಮಾಸ್ತರ...

## ರಾಜಕೀಯ ಕ್ಷೇತ್ರದ ಜಾಗತಿಕ ಭೂಪಟದಲ್ಲಿ ಐತಿಹಾಸಿಕ ಸಾಧನೆ ಮಾಡಿದ ಮೇರು ಪರ್ವತ

ಶಿಕ್ಷಣ • ಸಂಘಟನೆ • ಜನಸೇವೆ • ಸಾಧನೆ

ಕೆಲವು ವ್ಯಕ್ತಿಗಳೇ ಹಾಗೆ. ಎಲ್ಲೇ ಇದ್ದರೂ ಸ್ವಂತಿಕೆ, ನಿಷ್ಠುರತೆಯಿಂದ ಗಮನಸೆಳೆಯುತ್ತಾರೆ. ಅಂಥ ವಿಶಿಷ್ಟ ಶಕ್ತಿಯ ವ್ಯಕ್ತಿ ಬಸವರಾಜ ಹೊರಟ್ಟಿ ಅವರು. ಸದಾ ಶಿಕ್ಷಕರ ಒಡನಾಟ ಮತ್ತು ಅವರ ಬಗ್ಗೆ ಹೋರಾಟ ಮೈಗೂಡಿಸಿಕೊಂಡು ಬಂದಿರುವ ಇವರು ಶಿಕ್ಷಣ ಕ್ಷೇತ್ರದ ಮಾಣಿಕ್ಯ. ನುಡಿದಂತೆ ನಡೆಯುವ ದಿಟ್ಟ ನೇತಾರ. ಹಲವು ಹೊಸತುಗಳ ಹರಿಕಾರ. ಸೋಲಿಲ್ಲದ ಸರದಾರ. ಹೆಮ್ಮೆಯ ಹಮ್ಮೀರ.



ಶಿಕ್ಷಕರ ನಾಯಕ ದಣಿವರಿಯದ ಕಾಯಕ

### ಪರಿಷತ್‌ಗೆ ಹೊರಟ್ಟಿ

### ಶಿಕ್ಷಕರಾಗಿ ಸೇವೆ

### ಹೋರಾಟದಿಂದಲೇ ಹೊರಟ್ಟಿ

### ಯುವಕರಿಗೆ ದಾರಿದೀಪ

### ಬಾಲ್ಯದಿಂದಲೇ ಮನೆಯ



## ಮೂರು ಬಾರಿ ಸಭಾಪತಿ







## ನಿಷ್ಠೆ, ನೈತಿಕತೆಯ 45 ವರ್ಷದ ಪಯಣ



## ಹುಬ್ಬಳ್ಳಿಯಲ್ಲಿ ಐತಿಹಾಸಿಕ ಕಾರ್ಯಕ್ರಮ



-ಸಂತೋಷ ಲಾಡ್,

## ತವರೂರಿಗೆ ಕೊಡುಗೆ



## ಕೃಷಿಯಲ್ಲಿ ಖುಷಿ



ದೇಶಿ ಸೊಗಡು ಬೆರೆತ ಹೊರಟ್ಟಿ



-ಶಂಕರಣ್ಣ ಮುನವಳ್ಳಿ




# ಡಿ.13ರಂದು ಬಸವರಾಜ ಹೊರಟ್ಟಿ ಅವರಿಗೆ ಗೌರವ ಸನ್ಮಾನ ಕಾರ್ಯಕ್ರಮ

ಗದಗ, ಡಿ.11. ಸತತವಾಗಿ 8 ಬಾರಿ ಪಶ್ಚಿಮ ಶಿಕ್ಷಕರ ಮತಕ್ಷೇತ್ರದಿಂದ ಆಯ್ಕೆಯಾಗಿ, ವಿಧಾನ ಪರಿಷತ್ ಸದಸ್ಯರಾಗಿ ವಿಶ್ವ ದಾಖಲೆ ನಿರ್ಮಿಸಿ, 45 ವರ್ಷ ಪೂರೈಸಿದ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರಿಗೆ, ಗೌರವ ಸನ್ಮಾನ ಕಾರ್ಯಕ್ರಮ ಹುಬ್ಬಳ್ಳಿಯ ನೆಹರು ಮೈದಾನದಲ್ಲಿ, ಡಿ.13ರಂದು ನಡೆಯಲಿದೆ ಎಂದು, ರವಿ ದಂಡಿನ್ ಹೇಳಿದರು.




ಇಲ್ಲಿನ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬಸವರಾಜ ಹೊರಟ್ಟಿಯವರು ಅಜಾತಶತ್ರು ರಾಜಕಾರಣಿಯಾಗಿದ್ದಾರೆ. ರಾಜ್ಯದ ಹಲವಾರು ಮುಖ್ಯಮಂತ್ರಿಗಳ ಜೊತೆ ಅನ್ಯೋನ್ಯ ಸಂಬಂಧ ಹೊಂದಿದ್ದರು. ಶಿಕ್ಷಣ ಕ್ಷೇತ್ರಕ್ಕಾಗಿ ಶ್ರಮವಹಿಸಿದ ಏಕೈಕ ರಾಜಕಾರಣಿಯಾಗಿದ್ದಾರೆ. ಈ ಹಿನ್ನಲೆಯಲ್ಲಿ ಅವರಿಗೆ ಬಿಜೆಪಿ, ಜೆಡಿಎಸ್, ಕಾಂಗ್ರೆಸ್ ಪಕ್ಷದ ಪ್ರಮುಖರು ಸನ್ಮಾನಿಸಿ ಗೌರವಿಸುತ್ತಿರುವುದು ಸಂತಸದ ವಿಷಯವಾಗಿದೆ ಎಂದು ಹೆಮ್ಮೆಯಿಂದ ಹೇಳಿದರು.

ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಪಾಲಿಗೆ ಬೆಳಕಾಗಿ ಪರಿಹಾರ ನೀಡಿದ್ದಾರೆ. ಖಾಸಗಿ ಶಿಕ್ಷಣ ಸಂಸ್ಥೆಗಳ ಎಲ್ಲ ಕಾರ್ಯಕ್ರಮಗಳಿಗೆ ಅವರು ಆಗಮಿಸಿ, ಸಲಹೆ-ಸೂಚನೆ ನೀಡುತ್ತಾರೆ. ಜಗತ್ತು ಕಂಡ ಇಂತಹ ಅಪರೂಪದ ರಾಜಕಾರಣಿಗೆ ಗೌರವ ಸಲ್ಲಿಸುತ್ತಿದ್ದೇವೆ. ಈ ಕಾರ್ಯಕ್ರಮಕ್ಕೆ ರಾಜ್ಯದ ಎಲ್ಲ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರು, ಶಿಕ್ಷಕರು, ಬಸವರಾಜ ಹೊರಟ್ಟಿ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಅಂತ ಮನವಿ ನೀಡಿದರು.

ಕಾರ್ಯಕ್ರಮದ ಉದ್ಘಾಟನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನೆರವೇರಿಸಲಿದ್ದಾರೆ. ಸಾನಿಧ್ಯವನ್ನು ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆ ವಹಿಸಿಕೊಳ್ಳಲಿದ್ದಾರೆ. ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ಡಿಸಿಎಂ ಡಿ.ಕೆ. ಶಿವಕುಮಾರ, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಸಭಾಪತಿ ಯು.ಟಿ. ಖಾದರ ಅವರು, ಬಸವರಾಜ ಹೊರಟ್ಟಿಯವರಿಗೆ ಸನ್ಮಾನಿಸಲಿದ್ದು, ಅಧ್ಯಕ್ಷತೆಯನ್ನು ಕಾರ್ಮಿಕ ಸಚಿವ ಸಂತೋಷ್ ಲಾಡ್ ವಹಿಸಿಕೊಳ್ಳಲಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ, ಜಗದೀಶ ಶೆಟ್ಟರ, ಬಸವರಾಜ ಬೊಮ್ಮಾಯಿ, ಎಚ್.ಕೆ. ಪಾಟೀಲ, ಡಾ.ಎಂ.ಸಿ ಸುಧಾಕರ, ಮಧು ಬಂಗಾರಪ್ಪ, ಶಿವಾನಂದ ಪಾಟೀಲ, ಮಂಕಾಳ ವೈದ್ಯ, ಆರ್.ವಿ. ದೇಶಪಾಂಡೆ, ವಿಶ್ವೇಶ್ವರ ಹೆಗಡೆ ಕಾಗೇರಿ, ಡಾ.ಪ್ರಭಾಕರ ಕೋರೆ, ವಿಜಯ್ ಸಂಕೇಶ್ವರ ಸೇರಿದಂತೆ, ಹಲವು ಗಣ್ಯರು ಆಗಮಿಸಲಿದ್ದಾರೆ ಎಂದರು.

ಈ ವೇಳೆ ಉಮೇಶ ಹಿರೇಮಠ, ಎಂ.ಕೆ ಲಮಾಣಿ, ಎ. ಎಸ್ ಪಾಟೀಲ, ಬೂದಪ್ಪ ಅಂಗಡಿ, ಬಿ. ಕೆ ನಿಂಬನಗೌಡ್ರ, ಗಿರೀಶ ನರಗುಂದ ಉಪಸ್ಥಿತರಿದ್ದರು.

ಎಂದು ಕರೆ ನೀಡಿದರು.

17 ಜೋಡಿ ನೂತನ ವಧು ವರರಿಗೆ ಹೆಬ್ಬಾಳದ

ಈ ಸಂದರ್ಭದಲ್ಲಿ ಮಾಜಿ ಸಂಸದರು ಎಸ್.ಶಿವರಾಮಗೌಡ, ಕೆ.ಚನ್ನಬಸಯ್ಯಸ್ವಾಮಿ, ಅಯೋಧ್ಯ

ಮಾಂತುಗೊಂಡ, ಸಾಗರ್ ಮುನವಳ್ಳಿ, ಕಂಪ್ಲಿ ಸೋಮಶೇಖರ್, ಚೆನ್ನಪ್ಪ

ಗಲಗಲಿ ಮಹಾಂತೇಶ್, ಕಕ್ಕಂಗೋಳಿ ಅಯ್ಯನಗೌಡ, ಈರಣ್ಣ ಶೆಟ್ಟರ್, ಅಶೋಕ್, ನಾಗರಾಜ್ ಮತ್ತಿತರು ಇದ್ದರು.

12.12.25

# ಶಿಕ್ಷಕ ಸ್ನೇಹಿ ಬಸವರಾಜ ಹೊರಟ್ಟಿ ಗೌರವ ಸನ್ಮಾನ ನಾಳೆ: ರವಿ ದಂಡಿನ

**ನಾಗರಿಕ ಸುದ್ದಿ**

ಗದಗ, 11 – ಸತತವಾಗಿ 8 ಬಾರಿ ಪಶ್ಚಿಮ ಶಿಕ್ಷಕ ಮತಕ್ಷೇತ್ರದಿಂದ ಆಯ್ಕೆಯಾಗಿ ವಿಧಾನ ಪರಿಷತ್‌ನ ಸದಸ್ಯರಾಗಿ 45 ವರ್ಷ ಪೂರೈಸುವ ಮೂಲಕ ವಿಶ್ವದಾಖಲೆ ನಿರ್ಮಿಸಿದ ಶಿಕ್ಷಕಸ್ನೇಹಿ, ಶಿಕ್ಷಣಪ್ರೇಮಿ, ಸಭಾಪತಿ ಬಸವರಾಜ ಹೊರಟ್ಟಿಯವರ ಗೌರವ ಸನ್ಮಾನ ಸಮಾರಂಭ ಡಿ. 13 ರ ಶನಿವಾರ ಸಾಯಂಕಾಲ 4 ಗಂಟೆಗೆ ಹುಬ್ಬಳ್ಳಿಯ ನೆಹರೂ ಮೈದಾನದಲ್ಲಿ ಆಯೋಜಿಸಲಾಗಿದೆ ಎಂದು ಕನಕದಾಸ ಶಿಕ್ಷಣ ಸಮಿತಿಯ ಕಾರ್ಯದರ್ಶಿ ರವಿ ದಂಡಿನ ಹೇಳಿದರು.

ಅವರು ಗುರುವಾರ ಗದಗ ನಗರದ ಪತ್ರಿಕಾಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಸುದ್ದಿಗೋಷ್ಠಿ ಯಲ್ಲಿ ಈ ಕುರಿತು ಮಾತನಾಡಿದರು. ನಿರಂತರವಾಗಿ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಿ ಹೋರಾಟದ ಮೂಲಕ ಬದುಕು ರೂಪಿಸಿಕೊಂಡ ಬಸವರಾಜ ಹೊರಟ್ಟಿಯವರು ರಾಜಕೀಯ



ರಂಗದಲ್ಲಿ ಅಜಾತಶತ್ರುವಾಗಿದ್ದಾರೆ. ಉತ್ತರ ಕರ್ನಾಟಕದ ಶೈಕ್ಷಣಿಕ ಅಭಿವೃದ್ಧಿಯಲ್ಲಿ ಅವರ ಪಾತ್ರ ಪ್ರಮುಖವಾಗಿದ್ದು, ಈ ಹಿನ್ನಲೆಯಲ್ಲಿ ಗೌರವ ಸಮರ್ಪಣೆ ಕಾರ್ಯಕ್ರಮವನ್ನು ಪಕ್ಷಾತೀತವಾಗಿ ನಡೆಸಲಾಗುತ್ತಿದ್ದು, ಕಾರ್ಯಕ್ರಮಕ್ಕೂ ಮುನ್ನ ಹುಬ್ಬಳ್ಳಿ ಲ್ಯಾಮಿಂಗ್ಟನ್ ಶಾಲೆಯಿಂದ ಮಧ್ಯಾಹ್ನ 2 ಗಂಟೆಗೆ ಭವ್ಯ ಮೆರವಣಿಗೆ ಜರುಗಲಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯ ಉದ್ಘಾಟನೆ ನೆರವೇರಿಸಲಿದ್ದು, ರಾಜ್ಯಸಭಾ ಸದಸ್ಯ ಹಾಗೂ ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆ ಸಾನಿಧ್ಯ ವಹಿಸುವರು. ಆಹಾರ ಮತ್ತು ಸಾರ್ವಜನಿಕ ವಿತರಣೆ ಖಾತೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಕೇಂದ್ರ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ, ರಾಜ್ಯ ವಿಧಾನಸಭೆ ಸಭಾಧ್ಯಕ್ಷ ಯು.ಟಿ. ಖಾದರ ಪಾಲ್ಗೊಳ್ಳಲಿದ್ದು, ಕಾರ್ಮಿಕ ಇಲಾಖೆ ಸಚಿವ ಸಂತೋಷ ಲಾಡ್ ಅಧ್ಯಕ್ಷತೆ ವಹಿಸುವರು.

ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಸಂಸದರಾದ ಜಗದೀಶ ಶೆಟ್ಟರ, ಬಸವರಾಜ ಬೊಮ್ಮಾಯಿ, ಕಾನೂನು ಸಚಿವ ಎಚ್.ಕೆ. ಪಾಟೀಲ, ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ, ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಬೂದಪ್ಪ ಅಂಗಡಿ, ಎ.ಎಸ್. ಪಾಟೀಲ, ನಿಂಬನಗೌಡ್ರ, ಉಮೇಶ ಹಿರೇಮಠ, ಎಂ.ಕೆ. ಲಮಾಣಿ, ಗಿರೀಶ ನರಗುಂದ, ಇದ್ದರು.

ಬಿ.ಎಂ.ಟಿ.ಸಿ ಗೆ 4500 ವಿದ್ಯುತ್ ಚಾಲಿತ

ಕನ್ನಡಪ್ರಭ

# ಹೊರಟ್ಟಿ ಅಭಿನಂದನಾ ಸಮಾರಂಭ ಯಶಸ್ಸಿಗೆ ಶ್ರಮಿಸಿ

## ಪೂರ್ವಭಾವಿ ಸಭೆಯಲ್ಲಿ ಸಚಿವ ಸಂತೋಷ ಲಾಡ್ ಸೂಚನೆ | ಶಿಕ್ಷಕರಿಗೆ ವಾಹನದ ವ್ಯವಸ್ಥೆ ಕಲ್ಪಿಸಿ

• **ಕನ್ನಡಪ್ರಭ ವಾರ್ತೆ** ಹುಬ್ಬಳ್ಳಿ

ಡಿ. 13ರಂದು ಸಂಜೆ 4 ಗಂಟೆಗೆ ನೆಹರು ಮೈದಾನದಲ್ಲಿ ಆಯೋಜಿಸಿರುವ ಸಭಾಪತಿ ಬಸವರಾಜ ಹೊರಟ್ಟಿ ಅವರ ಅಭಿನಂದಾನ ಸಮಾರಂಭ ಅಚ್ಚುಕಟ್ಟಾಗಿ ನಡೆಯಬೇಕು. ಈ ಹಿನ್ನೆಲೆಯಲ್ಲಿ ಪ್ರತಿಯೊಬ್ಬರೂ ತಮಗೆ ವಹಿಸಿರುವ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ನಿರ್ದೇಶನ ನೀಡಿದರು.



ಇಲ್ಲಿನ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ಬುಧವಾರ ಸಂಜೆ ಸನ್ಮಾನ ಸಮಾ ರಂಭ ಕುರಿತು ಏರ್ಪಡಿಸಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಧಾರವಾಡ, ಗದಗ, ಹಾವೇರಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಶಿಕ್ಷಕರು ಮತ್ತು ಅಭಿಮಾನಿಗಳನ್ನು ಆಹ್ವಾನಿಸಬೇಕು. ಎಷ್ಟು ಜನ ಶಿಕ್ಷಕರು ಪಾಲ್ಗೊಳ್ಳುತ್ತಿದ್ದಾರೆ ? ಎಂದು ಸಭೆಯಲ್ಲಿ ಭಾಗವಹಿಸಿದ್ದ ಶಿಕ್ಷಕ ಮುಖಂಡರನ್ನು ಪ್ರಶ್ನಿಸಿದರು. ದೂರದ ಊರುಗಳ ಶಿಕ್ಷಕರು ಬರಲು ವಾಹನ ವ್ಯವಸ್ಥೆ ಮಾಡಬೇಕು. ಇಲ್ಲವೇ ಸ್ವಂತ ಕಾರುಗಳಿದ್ದರೆ ಅದರಲ್ಲಿ ಇತರ ಶಿಕ್ಷಕರನ್ನು ಕರೆತರುವಂತೆ ಸೂಚಿಸಬೇಕು ಎಂದರು.

ಸಮಾರಂಭದ ದಿನ ಸಂಚಾರ ದಟ್ಟಣೆಯಾಗದಂತೆ ಪೊಲೀಸರು ಸೂಕ್ತ ವ್ಯವಸ್ಥೆ ಮಾಡಬೇಕು. ವಾಹನಗಳ ಪಾರ್ಕಿಂಗ್ ಬಹಳ ದೂರ ನಿಗದಿಪಡಿಸಬಾರದು ಎಂದು ಪೊಲೀಸ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಮಾರಂಭದಲ್ಲಿ ಪಾಲ್ಗೊಳ್ಳಲಿರುವ ಎಲ್ಲ ಸ್ವಾಮೀಜಿಗಳಿಗೆ ವೇದಿಕೆಯಲ್ಲಿ ಆಸನದ ವ್ಯವಸ್ಥೆ ಮಾಡಬೇಕು. ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಮಾಜಿ ಮುಖ್ಯಮಂತ್ರಿಗಳು, ಕೇಂದ್ರ ಸಚಿವರು ಸೇರಿದಂತೆ ಇನ್ನಿತರ ಗಣ್ಯರ ಭಾಷಣದ ನಂತರವೂ ಸಮಾರಂಭ ಮುಂದುವರಿಯುತ್ತದೆ. ಕನಿಷ್ಠ 4 ಗಂಟೆ ಕಾರ್ಯಕ್ರಮ ನಡೆಯುವ ಸಾಧ್ಯತೆ ಇದೆ. ಹೀಗಾಗಿ, ಮಧ್ಯೆ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ತಿಳಿಸಿದರು.

ಎಂ.ಡಿ. ಪಲ್ಲವಿ, ಅನನ್ಯ ಭಟ್ ಸೇರಿದಂತೆ ಪ್ರಮುಖ ಗಾಯಕರನ್ನು ಕರೆಯಿಸಬೇಕು. ಕಾರ್ಯಕ್ರಮದ ಅಚ್ಚುಕಟ್ಟು ನಿರೂಪಣೆಗಾಗಿ ಬೆಂಗಳೂರಿನಿಂದ ಆ್ಯಂಕರ್‌ಗಳನ್ನು ಕರೆಯಿಸಬೇಕು. ಬಸವರಾಜ ಹೊರಟ್ಟಿ ಅವರ ಬಾಲ್ಯ, ರಾಜಕೀಯ ಜೀವನ ಸೇರಿದಂತೆ ಇನ್ನಿತರ ಮಾಹಿತಿಗಳನ್ನೊಳಗೊಂಡ ಎರಡ್ಮೂರು ಪ್ರತ್ಯೇಕ ವಿಡಿಯೋ ಪ್ರದರ್ಶಿಸಬೇಕು. ಕಳೆದ ಶೈಣಿಕ ವರ್ಷದಲ್ಲಿ ರ್‍ಯಾಂಕ್ ಪಡೆದ ಧಾರವಾಡ ಜಿಲ್ಲೆಯ ವಿದ್ಯಾರ್ಥಿಗಳನ್ನು ಅವ್ವ ಟ್ರಸ್ಟ್‌ನಿಂದ ಸನ್ಮಾನಿಸುವಂತೆ ಸೂಚಿಸಿದರು.

ಈ ವೇಳೆ ಶಾಸಕ ಎನ್.ಎಚ್. ಕೋನರಡ್ಡಿ, ಕೆಎಲ್ಇ ನಿರ್ದೇಶಕ ಶಂಕರಣ್ಣ ಮುನವಳ್ಳಿ, ವಿಪ ಮಾಜಿ ಸದಸ್ಯ ಮೋಹನ ಲಿಂಬಿಕಾಯಿ, ಲಿಂಗರಾಜ ಪಾಟೀಲ, ರಾಜಣ್ಣ ಕೊರವಿ, ಅನಿಲಕುಮಾರ ಪಾಟೀಲ, ಅಲ್ತಾಫ ಹಳ್ಳೂರ ಇದ್ದರು.


Powered by: erelego.com